# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 431 (499) |
| ಸದಸ್ಯರ ಹೆಸರು | : | ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 30.01.2026 |
| ಉತ್ತರಿಸುವ ಸಚಿವರು | : | ಮಾನ್ಯ ಯೋಜನಾ ಮತ್ತು ಸಾಂಖ್ಯಿಕ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕರಾವಳಿ ಅಭಿವೃದ್ಧಿ ಮಂಡಳಿಯನ್ನು ಉನ್ನತೀಕರಿಸಿದ್ದು, 2024-25 ಮತ್ತು 2025-26ನೇ ಸಾಲಿನ ಬಜೆಟ್‌ನಲ್ಲಿ ಕನಿಷ್ಟ ರೂ.100 ಕೋಟಿ ಅನುದಾನ ಒದಗಿಸಿಕೊಡಬೇಕೆಂಬ ಬೇಡಿಕೆ ಇದ್ದು, ಸರ್ಕಾರ ಕೈಗೊಂಡ ಕ್ರಮಗಳೇನು; ಮುಂದಿನ ಬಜೆಟ್ ನಲ್ಲಿ ಈ ಅನುದಾನವನ್ನು ನೀಡಲು ಕ್ರಮ ಕೈಗೊಳ್ಳುವುದೆ; | ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳ ವ್ಯಾಪ್ತಿಯನ್ನೊಳಗೊಂಡ ಕರಾವಳಿ ಅಭಿವೃದ್ಧಿ ಪ್ರಾಧಿಕಾರವನ್ನು ಮಂಡಳಿಯನ್ನಾಗಿ ಪರಿವರ್ತಿಸಿದ್ದು, ದಿನಾಂಕ:01.04.2025 ರಿಂದ ಅಧಿಕೃತವಾಗಿ ಕಾರ್ಯಾರಂಭ ಮಾಡಿರುತ್ತದೆ. ಕರಾವಳಿ ಅಭಿವೃದ್ಧಿ ಮಂಡಳಿಗೆ 2026-27ನೇ ಸಾಲಿನ ಆಯವ್ಯಯದಲ್ಲಿ ಹೆಚ್ಚು ಅನುದಾನವನ್ನು ಪ್ರಸ್ತಾಪಿಸಲಾಗುತ್ತದೆ. |
| (ಆ) | ಕರಾವಳೀ ಅಭಿವೃದ್ಧಿ ಮಂಡಳಿ ಸ್ವಂತ ಕಛೇರಿ ಸ್ಥಾಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; ಈ ಮಂಡಳಿಗೆ ಇಂಜಿನಿಯರ್ ಮತ್ತು ಸಿಬ್ಬಂದಿಗಳ ಕೊರತೆಯಿದ್ದು, ಈ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | ಕರಾವಳಿ ಅಭಿವೃದ್ಧಿ ಮಂಡಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಹೆಚ್ಚುವರಿ ಅನುದಾನದ ಪ್ರಸ್ತಾವನೆಯನ್ನು ಕಡತ ಸಂಖ್ಯೆ :PDS/79/PTP/2025 ರಲ್ಲಿ ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿದೆ.<br>ಕರಾವಳಿ ಅಭಿವೃದ್ಧಿ ಮಂಡಳಿಗೆ ಮಂಜೂರಾಗಿರುವ ಇಂಜಿನಿಯರ್ ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು. |
| (ಇ) | ಮಂಡಳಿಯಲ್ಲಿ ಶಾಸಕರು ಮತ್ತು ವಿಧಾನ ಪರಿಷತ್ ಶಾಸಕರು ಇದ್ದು, ಈ ಸದಸ್ಯರಿಗೆ 2024-25 ಸಾಲಿನಲ್ಲಿ ನೀಡಿದ ಅನುದಾನ ಎಷ್ಟು; (ವಿವರ ನೀಡುವುದು) | ಕರಾವಳಿ ಅಭಿವೃದ್ಧಿ ಮಂಡಳಿ ವ್ಯಾಪ್ತಿಯ ಶಾಸಕರುಗಳಿಗೆ ಪ್ರಾಧಿಕಾರದ ಅವಧಿಯಲ್ಲಿ ಅನುದಾನ ಹಂಚಿಕೆ ಮಾಡಲು ನಿಯಮಗಳಲ್ಲಿ ಅವಕಾಶಗಳನ್ನು ಕಲ್ಪಿಸಿರಲಿಲ್ಲ.<br>ಕರಾವಳಿ ಅಭಿವೃದ್ಧಿ ಪ್ರಾಧಿಕಾರವನ್ನು ಮಂಡಳಿಯಾಗಿ ಪರಿವರ್ತಿಸಿದ ನಂತರ ಪ್ರತಿ ಕ್ಷೇತ್ರಕ್ಕೆ ರೂ.35.00 ಲಕ್ಷಗಳನ್ನು ಹಂಚಿಕೆ ಮಾಡಲಾಗಿರುತ್ತದೆ. |
| (ಈ) | ಕರಾವಳಿ ಅಭಿವೃದ್ಧಿ ಮಂಡಳಿಯಲ್ಲಿ ಪ್ರಸ್ತುತ ಯಾವ ಯಾವ ಮಾನದಂಡದಲ್ಲಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ; ಮುಂದಿನ ಯೋಜನೆಗಳಾವುವು; (ವಿವರ ನೀಡುವುದು) | ಕರಾವಳಿ ಅಭಿವೃದ್ಧಿ ಮಂಡಳಿಯು ಸರ್ಕಾರವು ನಿಗದಿಪಡಿಸುವ ಅನುದಾನದ ಮಿತಿಯಲ್ಲಿ ಕಾಯ್ದೆಯಲ್ಲಿ ಅವಕಾಶವಿರುವ ಯೋಜನೆಗಳನ್ನು/ಕಾಮಗಾರಿಗಳನ್ನು ಕೈಗೊಳ್ಳಲು ನಿರ್ಣಯಿಸುತ್ತದೆ. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಉ) | ಪ್ರವಾಸೋದ್ಯಮಕ್ಕೆ ಸಂಬಂಧಪಟ್ಟಂತೆ ಕರಾವಳಿ ಅಭಿವೃದ್ಧಿ ಪ್ರಾಧಿಕಾರದಲ್ಲಿ ನಡೆಸಲು ಸರ್ಕಾರದಿಂದ ಮಾರ್ಗದರ್ಶನ ನೀಡಲಾಗಿದೆಯೇ; ಕರಾವಳಿ ಅಭಿವೃದ್ಧಿ ಮಂಡಳಿಯು ಪ್ರವಾಸೋದ್ಯಮ ಮಂಡಳಿಯ ಜೊತೆ ಸೇರಿ ಕೆಲಸ ಮಾಡಲು ಇಲಾಖೆ ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು) | ಕರಾವಳಿ ಅಭಿವೃದ್ಧಿ ಮಂಡಳಿಯು ಪ್ರವಾಸೋದ್ಯಮ ಇಲಾಖೆಯ ಜೊತೆ ಸಂಪರ್ಕ ಸಾಧಿಸಿ ಅಗತ್ಯ ಯೋಜನೆಗಳನ್ನು ರೂಪಿಸಲು ಕ್ರಮಕೈಗೊಳ್ಳಬಹುದಾಗಿರುತ್ತದೆ. |

**ಸಂಖ್ಯೆ: ಪಿಡಿಎಸ್ 5 ಕೆಡಿಬಿ 2026**

**(ಡಿ.ಸುಧಾಕರ್)**